# ತುಮಕೂರು ವಿಶ್ವವಿದ್ಯಾನಿಲಯ

**ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103☏ : 0816-2255650, 2273511 ಫ್ಯಾಕ್ಸ್ : 0816-2270719**


**ಸಂಖ್ಯೆ : ತು.ವಿ. : ಪ.ವಿ. - 2023-24/ 954** **ದಿನಾಂಕ: 29.12.2023**

## ಸುತ್ತೋಲೆ

ವಿಷಯ: ಯುವನಿಧಿ ಯೋಜನೆಗೆ ಸಂಬಂಧಿಸಿದಂತೆ ಫಲಾನುಭವಿಗಳ ವಿವರಗಳನ್ನು ಕ್ರೂಢೀಕರಿಸುವ ಬಗ್ಗೆ

ಉಲ್ಲೇಖ: ಸುತ್ತೋಲೆ ಸಂಖ್ಯೆ: ತು.ವಿ.: ಪ.ವಿ: 2023-24: 949, ದಿನಾಂಕ: 28.12.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರದ ಮಹತ್ತರ ಯೋಜನೆಗಳಲ್ಲಿ ಒಂದಾದ ನಿರುದ್ಯೋಗಿ ಪದವೀದರರಿಗೆ ಧನಸಹಾಯ ನೀಡುವ "ಯುವನಿಧಿ" ಯೋಜನೆಗೆ ಸಂಬಂಧಿಸಿದಂತೆ ಸರ್ಕಾರವು ನಿಗಧಿಪಡಿಸಿರುವ ಮಾನದಂಡಗಳ ಅನುಸಾರ ಫಲಾನುಭವಿಗಳನ್ನು ಗುರುತಿಸುವ ಹಾಗೂ ಅವರನ್ನು ಸದರಿ ಯೋಜನೆಗೆ ನೋಂದಾಯಿಸುವ ಕಾರ್ಯಗಳು ಈಗಾಗಲೇ ಪ್ರಾರಂಭಗೊಂಡಿರುತ್ತದೆ. ಈ ಸಂಬಂಧ ಮಾರ್ಗಸೂಚಿಗಳನ್ನು ವಿಶ್ವವಿದ್ಯಾನಿಲಯದ ಸಂಯೋಜಿತ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರಿಗೆ ಸಂಬಂಧಪಟ್ಟ ವಾಟ್ಸಾಪ್ ಗ್ರೂಪ್‌ನಲ್ಲಿ ಹಂಚಿಕೊಳ್ಳಲಾಗಿರುತ್ತದೆ.

ಸದರಿ ಯೋಜನೆಗೆ ಸಂಬಂಧಿಸಿದಂತೆ ಕಾಲೇಜು ಹಂತಗಳಲ್ಲಿ ನಿರ್ವಹಿಸಬೇಕಾದ ಕಾರ್ಯಗಳ ಬಗ್ಗೆ ತಿಳಿಸುವ ಸಲುವಾಗಿ ದಿನಾಂಕ: 28.12.2023 ರಂದು ಪರೀಕ್ಷಾಂಗ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ಮಾನ್ಯ ಜಿಲ್ಲಾಧಿಕಾರಿಗಳು, ಹಾಗೂ ಮಾನ್ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ತುಮಕೂರು ಜಿಲ್ಲೆ ರವರುಗಳ ಉಪಸ್ಥಿತಿಯಲ್ಲಿ ಆನ್‌ಲೈನ್ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಕಾಲೇಜು ಪ್ರಾಂಶುಪಾಲರುಗಳು ತಪ್ಪದೇ ಹಾಜರಾಗುವಂತೆ ಸೂಚಿಸಿದ್ದರೂ ಸಹ ಕೆಲವೇ ಕಾಲೇಜುಗಳ ಪ್ರಾಂಶುಪಾಲರುಗಳು ಪಾಲ್ಗೊಂಡಿರುತ್ತಾರೆ. ಅನೇಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳೇ ಗೈರುಹಾಜರಾಗಿದ್ದುದು ವಿಪರ್ಯಾಸದ ಸಂಗತಿಯಾಗಿರುತ್ತದೆ. ಇದನ್ನು ತುಮಕೂರು ವಿಶ್ವವಿದ್ಯಾನಿಲಯ ಹಾಗೂ ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿರುತ್ತದೆ. ಇದೊಂದು ಸರ್ಕಾರದ ಮಹತ್ತರವಾದಂತಹ ಯೋಜನೆಯಾಗಿದ್ದು ಇದರ ಯಶಸ್ವಿಗಾಗಿ ಎಲ್ಲರೂ ಶ್ರಮಿಸಬೇಕಾಗಿರುತ್ತದೆ. ಸದರಿ ಯೋಜನೆಗೆ ಸಂಬಂಧಿಸಿದಂತೆ ಮಾನ್ಯ ಶಾಸಕರಿಂದ ಮೊದಲುಗೊಂಡು, ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ವಿವಿಧ ಇಲಾಖೆಯ ಉಸ್ತುವಾರಿ ಸಚಿವರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಅನೇಕ ಸಭೆಗಳನ್ನು ಆಯೋಜಿಸಿ ಮಾಹಿತಿಗಳನ್ನು ಪಡೆದುಕೊಳ್ಳುತ್ತಿರುತ್ತಾರೆ. ಆದುದರಿಂದ ಮತ್ತೊಮ್ಮೆ ಈ ಸಂಬಂಧ ಯಾವುದೇ ಸಭೆಯನ್ನು ಆಯೋಜಿಸಿದಲ್ಲಿ ಕಡ್ಡಾಯವಾಗಿ ಹಾಜರಾಗುವುದು ಹಾಗೂ ಮಾಹಿತಿಗಳನ್ನು ಕೋರಿದಲ್ಲಿ ಅವುಗಳನ್ನು ಸಮಯದ ಮಿತಿಯೊಳಗೆ ಒದಗಿಸಲು ಸೂಚಿಸಲಾಗಿದೆ.

ಪ್ರಸ್ತುತ ಸಭೆಯಲ್ಲಿ ಕೆಲವೊಂದು ಮಾಹಿತಿಯನ್ನು ನೀಡಲು ಸೂಚಿಸಲಾಗಿದ್ದು, ಇದಕ್ಕೆ ಸಂಬಂಧಿಸಿದ ಗೂಗಲ್ ಶೀಟ್ ಲಿಂಕ್‌ನ್ನು ಇದರೊಂದಿಗೆ ಹಂಚಿಕೊಳ್ಳಲಾಗಿದೆ. ಸದರಿ ನಮೂನೆಯಲ್ಲಿ ತಮ್ಮ ಕಾಲೇಜು ವಿದ್ಯಾರ್ಥಿಗಳ ವಿವರಗಳನ್ನು ಶೀಘ್ರವಾಗಿ ಕ್ರೂಢೀಕರಿಸಿ ತುಂಬಲು ಹಾಗೂ ಈ ಸಂಬಂಧದ ದಾಖಲೆಗಳನ್ನು ಇಟ್ಟುಕೊಂಡು ಜಿಲ್ಲಾಡಳಿತ ಸೂಚಿಸಲ್ಪಟ್ಟ ಸಮಯಕ್ಕೆ ಒದಗಿಸಲು ಸೂಚಿಸಲಾಗಿದೆ.

(https://docs.google.com/spreadsheets/d/1QNqr83VCjLFPLDJDO3T73wtfX84f9zsBMH2A4IFLZ6g/edit?usp=sharing)

29/12/23.

**ಕುಲಸಚಿವರು (ಪರೀಕ್ಷಾಂಗ)**

ಗೆ,

ಪ್ರಾಂಶುಪಾಲರುಗಳು, ಘಟಕ ಕಾಲೇಜುಗಳು ಹಾಗೂ ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಜಿಲ್ಲಾಧಿಕಾರಿಗಳ ಆಪ್ತ ಕಾರ್ಯಾಲಯ, ತುಮಕೂರು ಜಿಲ್ಲೆ, ತುಮಕೂರು
2. ಮಾನ್ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಆಪ್ತ ಕಾರ್ಯಾಲಯ, ಜಿಲ್ಲಾ ಪಂಚಾಯತ್, ತುಮಕೂರು
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಮಾನ್ಯ ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
5. ಕಛೇರಿ ಪ್ರತಿ